ಪ್ರಜಾವಾಣಿ

Online Newspaper Clipping Service

**Dated, Friday, 02nd June– 2017** **Pg.No.02**

# ಆರೋಗ್ಯ ತಪಾಸಣಾ ಶಿಬಿರ



ಕೋಲಾರ: ವಿಶ್ವ ತಂಬಾಕು ವಿರೋಧಿ ದಿನಾಚರಣೆ ಅಂಗವಾಗಿ ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯ ಸಮುದಾಯ ವೈದ್ಯಕೀಯ ವಿಭಾಗದ ವತಿಯಿಂದ ನಗರದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಬುಧವಾರ ಆರೋಗ್ಯ ತಪಾಸಣಾ ಶಿಬಿರ ಮತ್ತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ವಿಭಾಗದ ವೈದ್ಯರು ಮತ್ತು ವಿದ್ಯಾರ್ಥಿಗಳು ತಂಬಾಕು ಉತ್ಪನ್ನಗಳ ಬಳಕೆಯಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳ ಬಗ್ಗೆ ಪ್ರಯಾಣಿಕರು ಹಾಗೂ ಮತ್ತು ಕೆಎಸ್‌ಆರ್‌ಟಿಸಿ ಸಿಬ್ಬಂದಿಗೆ ಶಿಬಿರದಲ್ಲಿ ಮಾಹಿತಿ ನೀಡಿದರು.

ಪ್ರಯಾಣಿಕರು ಹಾಗೂ ಸಿಬ್ಬಂದಿಗೆ ಕ್ಯಾನ್ಸರ್, ಹೃದಯ ಸಂಬಂಧಿ ಸಮಸ್ಯೆಗಳು, ಮಧುಮೇಹ ಹಾಗೂ ರಕ್ತದೊತ್ತಡ ಸಮಸ್ಯೆ ಬಗ್ಗೆ ತಪಾಸಣೆ ಮಾಡಲಾಯಿತು. ತಂಬಾಕು ಉತ್ಪನ್ನಗಳ ದುಷ್ಪರಿಣಾಮ ಕುರಿತು ಜಾಗೃತಿ ಮೂಡಿಸುವ ಪೋಸ್ಟರ್‌ಗಳನ್ನು ನಿಲ್ದಾಣದ ವಿವಿಧೆಡೆ ಅಂಟಿಸಲಾಯಿತು. ಅಲ್ಲದೇ, ಕರಪತ್ರಗಳನ್ನು ಹಂಚಲಾಯಿತು. ಧೂಮಪಾನ ವರ್ಜಿಸುವ ಕುರಿತು ಸಲಹೆ ನೀಡಲಾಯಿತು.